# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಅಬ್ದುಲ್ ಜಬ್ಬರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1315 |
| ಉತ್ತರಿಸಬೇಕಾದ ದಿನಾಂಕ | 17.12.2025 |
| ಉತ್ತರಿಸಬೇಕಾದ ಸಚಿವರು | ವಸತಿ, ವಕ್ಫ್ ಮತ್ತು ಅಲ್ಪ ಸಂಖ್ಯಾತರ ಕಲ್ಯಾಣ ಸಚಿವರು |

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ದಾವಣಗೆರೆ ಜಿಲ್ಲೆಯಲ್ಲಿರುವ ಒಟ್ಟು ಘೋಷಿತ ಕೊಳಗೇರಿ ಪ್ರದೇಶಗಳ ಸಂಖ್ಯೆ ಎಷ್ಟು; (ತಾಲ್ಲೂಕುವಾರು ಮಾಹಿತಿ ಒದಗಿಸುವುದು) | ದಾವಣಗೆರೆ ಜಿಲ್ಲೆಯ ವ್ಯಾಪ್ತಿಯಲ್ಲಿ ಒಟ್ಟು 80 ಘೋಷಿತ ಕೊಳಗೇರಿ ಪ್ರದೇಶಗಳು ಇರುತ್ತದೆ. ತಾಲ್ಲೂಕುವಾರು ವಿವರಗಳು ಕೆಳಕಂಡಂತಿದೆ. (ಕೆಳಗಿನ ಕೋಷ್ಟಕ) |
| ಆ | ಕೊಳಗೇರಿ ಪ್ರದೇಶಗಳಲ್ಲಿ ವಾಸಿಸುತ್ತಿರುವ ಜನರಿಗೆ ಯಾವ ಯಾವ ರೀತಿಯ ಸೌಲಭ್ಯ/ ಸವಲತ್ತುಗಳನ್ನು ನೀಡಲಾಗುತ್ತಿದೆ; | ಘೋಷಿತ ಕೊಳಗೇರಿ ಪ್ರದೇಶಗಳಲ್ಲಿ ವಾಸಿಸುತ್ತಿರುವ ನಿವಾಸಿಗಳಿಗೆ ಸರ್ಕಾರವು ಆಯವ್ಯಯದಲ್ಲಿ ಕೊಳಗೇರಿ ಸುಧಾರಣೆ ಯೋಜನೆಯಡಿ ಒದಗಿಸುವ ಅನುದಾನಕ್ಕೆ ಅನುಗುಣವಾಗಿ ಮೂಲಭೂತ ಸೌಲಭ್ಯ ಕಾಮಗಾರಿಗಳಾದ ರಸ್ತೆ, ಚರಂಡಿ, ಒಳಚರಂಡಿ, ಕುಡಿಯುವ ನೀರು, ಬೀದಿ ದೀಪ, ಸಮುದಾಯ ಶೌಚಾಲಯ ಹಾಗೂ ಸಮುದಾಯ ಭವನ ಮುಂತಾದ ಕಾಮಗಾರಿಗಳ ಕ್ರಿಯಾ ಯೋಜನೆ ತಯಾರಿಸಿ ಸಕ್ಷಮ ಪ್ರಾಧಿಕಾರದ ಅನುಮೋದನೆ ಪಡೆದು ಕಾಮಗಾರಿಗಳನ್ನು ಕೈಗೆತ್ತಿಕೊಂಡು ನಿರ್ವಹಿಸಲಾಗುತ್ತಿದೆ ಹಾಗೂ ವಸತಿ ಯೋಜನೆಯನ್ನು ಸಹ ಅನುಷ್ಠಾನಗೊಳಿಸಲಾಗುತ್ತಿದೆ. |
| ಇ | ಕಳೆದ ಎರಡು ವರ್ಷಗಳಲ್ಲಿ ದಾವಣಗೆರೆ ಜಿಲ್ಲೆಯ ಕೊಳಗೇರಿ ಪ್ರದೇಶಗಳನ್ನು ಅಭಿವೃದ್ಧಿ ಪಡಿಸಲು ಸರ್ಕಾರ ಕೈಗೊಂಡ ಕ್ರಮಗಳು ಮತ್ತು ಯೋಜನೆಗಳಾವುವು? | ಕಳೆದ ಎರಡು ವರ್ಷಗಳಲ್ಲಿ ದಾವಣಗೆರೆ ಜಿಲ್ಲೆಯ ವ್ಯಾಪ್ತಿಯಲ್ಲಿ ಬರುವ ಕೊಳಗೇರಿ ಪ್ರದೇಶಗಳಲ್ಲಿ ಅಭಿವೃದ್ಧಿಪಡಿಸಲು ಕೊಳಗೇರಿ ಸುಧಾರಣೆ ಯೋಜನೆಯಡಿ ಸರ್ಕಾರವು ಆಯವ್ಯಯದಲ್ಲಿ ಒದಗಿಸುವ ಅನುದಾನಕ್ಕೆ ಅನುಗುಣವಾಗಿ ಈ ಕೆಳಕಂಡ ಮೂಲಭೂತ ಸೌಲಭ್ಯ ಒದಗಿಸುವ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗಿದೆ. ವಿವರಗಳು ಈ ಕೆಳಕಂಡಂತಿವೆ. (ಕೆಳಗಿನ ಕೋಷ್ಟಕ) |

**ಅ — ತಾಲ್ಲೂಕುವಾರು ವಿವರ:**

| ಕ್ರ.ಸಂ | ತಾಲ್ಲೂಕು | ಕೊಳಗೇರಿ ಪ್ರದೇಶಗಳ ಸಂಖ್ಯೆ |
|---|---|---|
| 1 | ದಾವಣಗೆರೆ | 42 |
| 2 | ಚನ್ನಗಿರಿ | 13 |
| 3 | ಹರಿಹರ | 07 |
| 4 | ಜಗಳೂರು | 03 |
| 5 | ಹೊನ್ನಾಳಿ | 13 |
| 6 | ನ್ಯಾಮತಿ | 02 |
| | **ಒಟ್ಟು** | **80** |

**ಇ — ಕಾಮಗಾರಿಗಳ ವಿವರ:**

| ವರ್ಷ | ತಾಲ್ಲುಕು | ಕೊ.ಪ್ರ. ಹೆಸರು | ಕಾಮಗಾರಿ | ಅಂದಾಜುಮೊತ್ತ | ಷರಾ |
|---|---|---|---|---|---|
| 2023-24 | ಈ ಸಾಲಿನಲ್ಲಿ ಯಾವುದೇ ಕಾಮಗಾರಿಗಳು ಮಂಜೂರಾಗಿರುವುದಿಲ್ಲ | | | | |
| 2024-25 | ದಾವಣಗೆರೆ | ಮಂಡಕ್ಕಿ ಭಟ್ಟಿ ಮತ್ತು ಶಿವ ನಗರ | ಸಿ.ಸಿ. ರಸ್ತೆ ಮತ್ತು ಸಿ.ಸಿ. ಚರಂಡಿ | 100.00 | ಕಾಮಗಾರಿ ಪೂರ್ಣಗೊಂಡಿದೆ |

ಸಂಖ್ಯೆ: ವಇ 89 ಎಸ್‌ಬಿಎಂ 2025]

(ಬಿ.ಝಡ್. ಜಮೀರ್ ಅಹಮದ್ ಖಾನ್)
ವಸತಿ, ವಕ್ಫ್, ಮತ್ತು ಅಲ್ಪ ಸಂಖ್ಯಾತರ
ಕಲ್ಯಾಣ ಸಚಿವರು

Scanned with OKEN Scanner